ಓ ಎಸ್ : **164/2014** ಪಿ. ಡಬ್ಲ್ಯೂ-1

ಸಾಕ್ಷಿಯನ್ನು ದಿಃ **10.07.2019** ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಸ್ ಬಿ ಎನ್ ವಕೀಲರಿಂದಃ

ನವೀನ್ ಕುಮಾರ್ ಬಿನ್ ನಟರಾಜ್, ವಯಸ್ಸು **29**, ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದ್ದೇ ಆಗಿರುತ್ತದೆ. ಈ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ದಿಃ **19.02.2014** ರಂದು ಸರ್ವೆ ನಂ **36/2** ಆಸ್ತಿಯ ಆರ್ ಟಿ ಸಿ ಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**1** ಎಂದು, ದಿಃ**19.02.2014** ರಂದು ಸರ್ವೆ ನಂ **37/1** ಆಸ್ತಿಯ ಆರ್ ಟಿ ಸಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**2**, **19.02.2014** ರಂದು ಸರ್ವೆ ನಂ **38/1** ಆಸ್ತಿಯ ಆರ್ ಟಿ ಸಿ ಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**3**, ದಿಃ**12.06.2014** ರಂದು ಪ್ರತಿವಾದಿಗಳಿಗೆ ನೀಡಿದ ಸೂಚನೆ ಪತ್ರದ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ.**4** ಎಂದು, ದಿಃ **12.06.2014** ರಲ್ಲಿ **5** ಅಂಚೆ ರಿಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.**5** ರಿಂದ **9** ಎಂದು, **5** ಅಂಚೆ ಸ್ವಿಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.**10** ರಿಂದ **14** ಎಂದು, ದಿಃ**23.06.2014** ರಂದು **2** ನೇ ಪ್ರತಿವಾದಿ ನೀಡಿರುವ ಉತ್ತರ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**15** ಎಂದು, ದಿಃ**23.06.2014** ರಂದು ಪ್ರತಿವಾದಿ **3** ಮತ್ತು **4** ನೇ ಪ್ರತಿವಾದಿ ನೀಡಿರುವ ಉತ್ತರ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**16** ಎಂದು, ದಿಃ **23.06.2014** ರಂದು **5** ನೇ ಪ್ರತಿವಾದಿ ನೀಡಿರುವ ಉತ್ತರ ನೋಟಿಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ **.17** ಎಂದು ಗುರುತಿಸಲಾಯಿತು.

ಪ್ರತಿವಾದಿ ಪರ ವಕೀಲರು ಪಾಟೀಸವಾಲಿಗೆ ಕಾಲವಕಾಶ ಕೋರಿದ್ದು ಕಾಲವಕಾಶ ನೀಡಿಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಈ ಮೇಲೆ ಸಾಕ್ಷಿ ಹೇಳಿದ ಸಾಕ್ಷ್ಯವನ್ನು ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿದ ನಂತರ, ಓದಿ ಹೇಳಿದ ಮೇರೆಗೆ ಸಾಕ್ಷಿ ಸರಿ ಇದೆ ಎಂದು ಒಪ್ಪಿ ತಮ್ಮ ಸಹಿ ಮಾಡಿರುತ್ತಾರೆ.)

ಓ ಹೇ ಕೇ ಸ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು
ಜೆ.ಎಂ.ಎಫ್.ಸಿ. ತಿ.ನರಸೀಪುರ